ಕರ್ನಾಟಕ ವಿಧಾನ ಪರಿಷತ್ತು

143ನೇ ಮುಂದುವರೆದ ಅಧಿವೇಶನ 2021

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: | 1741 |
| ಮಾನ್ಯ ಸದಸ್ಯರ ಹೆಸರು: | ಶ್ರೀ ಅಡಗೂರ್ ಹೆಚ್. ವಿಶ್ವನಾಥ್ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸುವ ಸಚಿವರು: | ಮಾನ್ಯ ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ) |
| ಉತ್ತರಿಸಬೇಕಾದ ದಿನಾಂಕ: | ------- ೨೨-೦೩-೨೦೨೧ |

| ಕ್ರ..ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ವಿಶ್ವವಿದ್ಯಾಲಯಗಳಿಂದ ಅಕ್ರಮವಾಗಿ ಗೌರವ ಡಾಕ್ಟರೇಟ್ ನೀಡುತ್ತಿರುವ ಬಗ್ಗೆ ಸರ್ಕಾರಕ್ಕೆ ದೂರು ಬಂದಲ್ಲಿ ಕ್ರಮ ಕೈಗೊಳ್ಳುವುದಾಗಿ ಕಳೆದ ಅಧಿವೇಶನದ ಅವಧಿಯಲ್ಲಿ ಮೇಲ್ಮನೆಯಲ್ಲಿ ಉನ್ನತ ಶಿಕ್ಷಣ ಸಚಿವರು ಭರವಸೆ ನೀಡಿರುವುದು ನಿಜವಲ್ಲವೇ; | **ಹೌದು.** |
| ಆ) | ಹಾಗಿದ್ದಲ್ಲಿ, ಅಕ್ರಮವಾಗಿ ರಾಜ್ಯಪಾಲರ ಸುತ್ತೋಲೆಯನ್ನು ಕಡೆಗಣಿಸಿ, ಅಲಯನ್ಸ್ ವಿಶ್ವವಿದ್ಯಾಲಯದಿಂದ ಮಾನ್ಯ ರಾಜ್ಯಪಾಲರಿಂದ ಗೌರವ ಡಾಕ್ಟರೇಟ್ ಪಡೆದಿರುವ ಪ್ರಕರಣದ ಬಗ್ಗೆ ಸರ್ಕಾರಕ್ಕೆ ದೂರು ಬಂದಿದ್ದು, ಈ ದೂರಿನ ಕುರಿತು ಕರ್ನಾಟಕ ಉನ್ನತ ಶಿಕ್ಷಣ ಪರಿಷತ್ತಿನ ಅಭಿಪ್ರಾಯ ಕೋರಲಾಗಿತ್ತೆ; ಹಾಗಿದ್ದಲ್ಲಿ ಈ ಬಗ್ಗೆ ಸದರಿ ಪರಿಷತ್ ನೀಡಿರುವ ಅಭಿಪ್ರಾಯ ವರದಿಗಳೇನು; | ಸರ್ಕಾರಕ್ಕೆ ದೂರು ಬಂದಿದ್ದರ ಮೇರೆಗೆ, ಈ ಕುರಿತು ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಅಭಿಪ್ರಾಯ/ವರದಿ ಕೋರಲಾಗಿ, "ಈ ಬಗ್ಗೆ ಎಲ್ಲಾ ಆಯಾಮಗಳಿಂದ ಪರಿಶೀಲಿಸುವ ಅಗತ್ಯತೆಯಿರುವ ಹಿನ್ನೆಲೆಯಲ್ಲಿ ಸರ್ಕಾರದ ಹಂತದಲ್ಲಿ ಸೂಕ್ತ ತನಿಖಾ ಸಂಸ್ಥೆಯಿಂದ ತನಿಖೆ ನಡೆಸಿ ಮುಂದಿನ ಕ್ರಮವಹಿಸಬಹುದಾಗಿದೆ" ಎಂದು ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ ಅಭಿಪ್ರಾಯ ನೀಡಿರುತ್ತದೆ. |
| ಇ) | ಈ ಶಿಪಾರಸ್ಸಿನನ್ವಯ ಪ್ರಕರಣದ ಕುರಿತು ಸೂಕ್ತ ತನಿಖಾ ಸಂಸ್ಥೆಯಿಂದ ತನಿಖೆ ನಡೆಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಒಂದು ವರ್ಷದಿಂದ ಸರ್ಕಾರ ಸದರಿ ದೂರಿನ ಕುರಿತು ಉನ್ನತ ಶಿಕ್ಷಣ ಪರಿಷತ್ತಿನಿಂದ ವರದಿ ಪಡೆದಿದ್ದು, ವರದಿಯಲ್ಲಿ ಈ ಆರೋಪವು ಗುರುತರವಾಗಿರುವುದರಿಂದ ಸರ್ಕಾರದ ಹಂತದಲ್ಲಿ ಸೂಕ್ತ ತನಿಖಾ ಸಂಸ್ಥೆಯಿಂದ ತನಿಖೆ ನಡೆಸಿ ಕ್ರಮಕೈಗೊಳ್ಳಲು ಶಿಫಾರಸ್ಸು ಮಾಡಿದಾಗ್ಯೂ ಸರ್ಕಾರ ಕ್ರಮ ಕೈಗೊಳ್ಳದಿರಲು ಕಾರಣಗಳೇನು; ಹಾಗೂ ಈ ಮುಂದೆ ಕೈಗೊಳ್ಳಲಿರುವ ಕ್ರಮಗಳೇನು; | ಅಲಯನ್ಸ್ ವಿಶ್ವವಿದ್ಯಾಲಯವು ರಾಜ್ಯ ಶಾಸನ ರಚನೆಯ ಮೂಲಕ ಖಾಸಗಿ ವಿಶ್ವವಿದ್ಯಾಲಯವಾಗಿ ಸ್ಥಾಪಿತಗೊಂಡಿರುತ್ತದೆ ಹಾಗೂ ಅಲಯನ್ಸ್ ಖಾಸಗಿ ವಿಶ್ವವಿದ್ಯಾಲಯದ ಅಧಿನಿಯಮ 2010ರ ಪ್ರಕರಣ 32(viii) ರಲ್ಲಿ ಗೊತ್ತುಪಡಿಸಿರುವಂತೆ ಗೌರವ ಡಾಕ್ಟರೇಟ್ ಪದವಿ ನೀಡಲು ಅಲಯನ್ಸ್ ವಿಶ್ವವಿದ್ಯಾಲಯವು ಸಕ್ಷಮವಾಗಿರುತ್ತದೆ. ಪ್ರಸ್ತಾಪಿತ ದೂರಿಗೆ ಸಂಬಂಧಿಸಿದ ಗೌರವ ಡಾಕ್ಟರೇಟ್ ಪದವಿಯನ್ನು 2017ರಲ್ಲಿ ಅಧಿಕೃತವಾಗಿ ನೀಡಿರುವುದಾಗಿ ಅಲಯನ್ಸ್ ವಿಶ್ವವಿದ್ಯಾಲಯವು ತಿಳಿಸಿರುತ್ತದೆ. ಈ ಹಿನ್ನೆಲೆಯಲ್ಲಿ, ಮುಂದಿನ ಕ್ರಮದ ಅಗತ್ಯತೆ ಇರುವುದಿಲ್ಲ. |

-2...

| | | |
|---|---|---|
| ಈ) | ಸದರಿ ಪ್ರಕರಣದಲ್ಲಿ ಉನ್ನತ ಶಿಕ್ಷಣ ಇಲಾಖೆಯ ಅಧಿಕಾರಿಗಳು ಶಾಮೀಲಾಗಿ ಪ್ರಕರಣವನ್ನು ಮುಚ್ಚಿ ಹಾಕಲು ಪ್ರಯತ್ನಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ; ಹಾಗಿದ್ದಲ್ಲಿ, ಅಂತಹವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು? | ಮೇಲ್ಕಂಡ ವಿವರಣೆಗಳ ಹಿನ್ನೆಲೆಯಲ್ಲಿ ಈ ಪ್ರಶ್ನೆ ಉದ್ಭವಿಸುವುದಿಲ್ಲ. |

ಸಂಖ್ಯೆ: ಇಡಿ/52/ಯುಆರ್‌ಸಿ/2021

(ಡಾ|| ಅಶ್ವಥನಾರಾಯಣ ಸಿ.ಎನ್)

ಮಾನ್ಯ ಉನ್ನತ ಶಿಕ್ಷಣ ಸಚಿವರು

(ಐಟಿ ಮತ್ತು ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ,

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು

ಜೀವನೋಪಾಯ ಇಲಾಖೆ)